ಇ) ಅಫ್‌ಜಲ್‌ಪುರ ತಾಲ್ಲೂಕಿನಲ್ಲಿ ರೈತರು 2008ನೇ ಸಾಲಿನಲ್ಲಿ ಬೆಳೆ ವಿಮೆ ಮಾಡಿಸಿದ್ದರೂ ಇದುವರೆವಿಗೂ ಬೆಳೆ ವಿಮೆ ಪರಿಹಾರ ನೀಡದಿರಲು ಕಾರಣವೇನು, ಯಾವಾಗ ನೀಡಲಾಗುವುದು?

ಶ್ರೀ ಕರುಣಾಕರ ರೆಡ್ಡಿ (ಕಂದಾಯ ಸಚಿವರು)

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ 2010ನೇ ಸಾಲಿನಲ್ಲಿ ಬಿದ್ದ ಭಾರಿ ಮಳೆಯಿಂದ 1,21,480–00 ಹೆಕ್ಟೇರ್ ಪ್ರದೇಶದ ವಿವಿಧ ಬೆಳೆಗಳು ಹಾನಿಯಾಗಿರುತ್ತವೆ. ಸದರಿ ಪ್ರದೇಶದ ಪೈಕಿ 62,005–00 ಹೆಕ್ಟೇರ್ ಪ್ರದೇಶದಲ್ಲಿ ಶೇಕಡಾ 50%ಕ್ಕಿಂತ ಹೆಚ್ಚಿಗೆ ಹಾನಿಯಾಗಿರುತ್ತದೆ. ಇದರಲ್ಲಿ ಸಿ.ಆರ್.ಎಫ್/ಎನ್.ಸಿ.ಸಿ.ಎಫ್ ಮಾರ್ಗಸೂಚಿ ಪ್ರಕಾರ 60,189–00 ಹೆಕ್ಟೇರ್ ಪ್ರದೇಶಕ್ಕೆ ರೂ. 1209–13 ಲಕ್ಷಗಳ ಬೆಳೆ ಪರಿಹಾರ ಅಂದಾಜಿಸಲಾಗಿದೆ.

2010ನೇ ಸಾಲಿನ ಮಳೆ ಹಾನಿಯ ಬಗ್ಗೆ ಒಟ್ಟು ರೂ. 1056.28 ಕೋಟಿ ಪರಿಹಾರ ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡೆಮ್ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಪರಿಹಾರ ಬಂದ ನಂತರ ಬೆಳೆ ಪರಿಹಾರ ನೀಡಲಾಗುವುದು.

ಆ) 2008ನೇ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯಡಿ ಗುಲ್ಬರ್ಗಾ ಜಿಲ್ಲೆಯ ಅಫ್ಜಲ್‌ಪುರ ತಾಲ್ಲೂಕಿನಲ್ಲಿ ಮುಂಗಾರು ಹಂಗಾಮಿಯಲ್ಲಿ 15969 ರೈತರು ಭಾಗವಹಿಸಿದ್ದು, ಇವರಲ್ಲಿ ಅರ್ಹರಿದ್ದ ಒಬ್ಬ ರೈತರಿಗೆ ನಿಯಮಾನುಸಾರ ರೂ. 329/–ಗಳ ಬೆಳೆ ವಿಮಾ ನಷ್ಟ ಪರಿಹಾರವನ್ನು ವಿತರಿಸಲಾಗಿದೆ.

ಗದಿಕೆರೆ ಮತ್ತು ಕಡತನಾಳ ಕೆರೆಗೆ ನೀರನ್ನು ತುಂಬಿಸುವುದು

72(345) ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ, ಕಿತ್ತೂರು ವಿಧಾನ ಸಭಾ ಕ್ಷೇತ್ರದಲ್ಲಿರುವ ಬೈಲಹೊಂಗಲ ತಾಲ್ಲೂಕಿನ ಗದಿಕೆರೆ ಮತ್ತು ಕಡತನಾಳ ಕೆರೆಗೆ ನೀರು ತುಂಬಿಸುವ ಯೋಜನೆಯು ಸರ್ಕಾರದ ಗಮನದಲ್ಲಿದೆಯೇ;

ಆ) ಹಾಗಿದ್ದಲ್ಲಿ, ಯೋಜನೆಯನ್ನು ಕಾರ್ಯಗತಗೊಳಿಸಲು ವಿಳಂಬವಾಗಲು ಕಾರಣಗಳೇನು (ವಿವರ ನೀಡುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಬೆಳಗಾವಿ ಜಿಲ್ಲೆ ಕಿತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬೈಲಹೊಂಗಲ ತಾಲ್ಲೂಕಿನ ಗದ್ದಿಕೆರೆ ಮತ್ತು ಕಡತನಾಳ ಕೆರೆಗೆ ನೀರು ತುಂಬಿಸುವ ಯೋಜನೆ ಸಣ್ಣ ನೀರಾವರಿ ಇಲಾಖೆಯ ಪರಿಶೀಲನೆಯಲ್ಲಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳು

73(348) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಸಿಂಧನೂರು ತಾಲ್ಲೂಕಿನಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ಮತ್ತು ಯಾವುವು; (ವರ್ಷವಾರು ಪೂರ್ಣ ವಿವರಗಳನ್ನು ನೀಡುವುದು)

ಆ) ಈ ಕಾಮಗಾರಿಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನದ ಮೊತ್ತವೆಷ್ಟು ಮತ್ತು ಈವರೆವಿಗೂ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು; (ವರ್ಷವಾರು ಪೂರ್ಣ ವಿವರಗಳನ್ನು ನೀಡುವುದು);

ಇ) ಈ ಕಾಮಗಾರಿಗಳು ಸಕಾಲದಲ್ಲಿ ಪೂರ್ಣಗೊಳ್ಳದಿರಲು ಹಾಗೂ ವಿಳಂಬವಾಗಲು ಕಾರಣಗಳೇನು; (ವಿವರಗಳನ್ನು ನೀಡುವುದು)

ಈ) ಈ ಕಾಮಗಾರಿಗಳ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಮೇಲೆ ಕ್ರಮಕೈಗೊಳ್ಳಲು ಸರ್ಕಾರಕ್ಕಿರುವ ತೊಂದರೆಗಳೇನು;

ಉ) ಈ ಎಲ್ಲಾ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; (ಪೂರ್ಣ ಮಾಹಿತಿಯನ್ನು ನೀಡುವುದು)?